# ಕರ್ನಾಟಕ ಸರ್ಕಾರ ನಡವಳಿಗಳು

**ವಿಷಯ:** ಖಜಾನೆಗಳಲ್ಲಿ ವರ್ಷಾಂತ್ಯದ ಬಿಲ್ಲುಗಳನ್ನು ಮಾರ್ಚ್ 31ರಂದೇ ತೀರ್ಣಗೊಳಿಸಿ ಲೆಕ್ಕವನ್ನು ಮುಕ್ತಾಯಗೊಳಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2021, ದಿನಾಂಕ:27-01-2021.

2) ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2021, ದಿನಾಂಕ:04.03.2021.

3) ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2021, ದಿನಾಂಕ:08.03.2021.

4) ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2021, ದಿನಾಂಕ:12.03.2021.

5) ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2021, ದಿನಾಂಕ:17.03.2021.

6) ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2021, ದಿನಾಂಕ:19.03.2021.

* * * * *

**ಪ್ರಸ್ತಾವನೆ:-**

2020-21ನೇ ಸಾಲಿನ ವರ್ಷಾಂತ್ಯದ ಬಿಲ್ಲುಗಳನ್ನು ಖಜಾನೆಗಳಲ್ಲಿ ಸ್ವೀಕರಿಸಿ ತೀರ್ಣಗೊಳಿಸಿ ದಿ:31-03-2021 ರಂದೇ 2020-21ನೇ ಸಾಲಿನ ಲೆಕ್ಕಗಳನ್ನು ಮುಕ್ತಾಯಗೊಳಿಸಲು ಉಲ್ಲೇಖ (1) ರ ಸರ್ಕಾರಿ ಆದೇಶದಲ್ಲಿ ಕಾಲಮಿತಿ ಸೂಚಿಸಿ ವೇಳಾಪಟ್ಟಿಯನ್ನು ನಿಗಧಿಪಡಿಸಲಾಗಿತ್ತು.

ಉಲ್ಲೇಖ (2), (3), (4), (5) ಮತ್ತು (6) ರ ಆದೇಶಗಳಲ್ಲಿ ವಿವಿಧ ಬಿಲ್ಲುಗಳನ್ನು ಖಜಾನೆಗೆ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಿ ಆದೇಶಿಸಲಾಗಿದೆ.

ಇಲಾಖೆಗಳಲ್ಲಿ ಬಿಲ್ಲುಗಳು ಬಾಕಿಯಿರುವುದನ್ನು ಪರಿಗಣಿಸಿ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2021, ಬೆಂಗಳೂರು, ದಿನಾಂಕ:24-03-2021**

ಈ ಕೆಳಕಂಡ ವೆಚ್ಚಗಳಿಗೆ ಸಂಬಂಧಿಸಿದಂತೆ ಈಗಾಗಲೇ ನಿಗಧಿಪಡಿಸಿರುವ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಿ ಆದೇಶಿಸಿದೆ.

| ಬಿಲ್ಲುಗಳ ಸ್ವರೂಪ / ವಿವರಗಳು | ದಿನಾಂಕ:19.03.2021 ರ ಆದೇಶದಲ್ಲಿ ನಿಗದಿಪಡಿಸಲಾದ ಕೊನೆಯ ದಿನಾಂಕ | ವಿಸ್ತರಿಸಿರುವ ದಿನಾಂಕ |
|---|---|---|
| 1) ವೇತನ / ವೇತನ ಬಾಕಿ ಬಿಲ್ಲುಗಳು / ಹಬ್ಬದ ಮುಂಗಡ ಬಿಲ್ಲುಗಳು/ ಅನುದಾನಿತ ವೇತನ ಬಿಲ್ಲುಗಳು / ಇತರೆ ಅನುದಾನಿತ ಬಿಲ್ಲುಗಳು. | 24.03.2021 | **26.03.2021** |

| | | |
|---|---|---|
| 2) ಕಛೇರಿ ವೆಚ್ಚಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು/ಪ್ರಯಾಣ ಭತ್ಯೆ ಬಿಲ್ಲುಗಳು: | 24.03.2021 | **26.03.2021** |
| 3) ವಿದ್ಯುಚ್ಛಕ್ತಿ, ದೂರವಾಣಿ ಹಾಗೂ ಕಟ್ಟಡ ಬಾಡಿಗೆಗೆ ಸಂಬಂಧಿಸಿದ ಬಿಲ್ಲುಗಳು. | 24.03.2021 | **26.03.2021** |
| 4) EAP ಕೇಂದ್ರ ಪುರಸ್ಕೃತ ಹಾಗೂ ಕೇಂದ್ರ ಯೋಜನೆಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಅನುದಾನ ಬಿಡುಗಡೆಯ ಬಿಲ್ಲುಗಳು. | 24.03.2021 | **26.03.2021** |
| 5) ಸಂಕ್ಷಿಪ್ತ ಸಾದಿಲ್ವಾರು ಬಿಲ್ಲುಗಳು ಹಾಗೂ **EAP,** ಕೇಂದ್ರ ಪುರಸ್ಕೃತ ಹಾಗೂ ಕೇಂದ್ರ ಯೋಜನೆ ಬಿಲ್ಲುಗಳು. | 25.03.2021 | **26.03.2021** |
| 6) ZP / TP ಯ ವೇತನ / ವೇತನೇತರ ಮತ್ತು ಅನುದಾನಿತ (GIA) ಬಿಲ್ಲುಗಳು (EAP ಕೇಂದ್ರ ಪುರಸ್ಕೃತ ಹಾಗೂ ಕೇಂದ್ರ ಯೋಜನೆಗಳನ್ನು ಹೊರತುಪಡಿಸಿ)" | 22.03.2021 | **26.03.2021** |

ಮೇಲ್ಕಂಡ ಬಿಲ್ಲುಗಳನ್ನು ಹೊರತುಪಡಿಸಿ ಉಳಿದ ಬಿಲ್ಲುಗಳನ್ನು ಸಲ್ಲಿಸಲು ಸರ್ಕಾರದ ಆದೇಶ ಸಂಖ್ಯೆ: ಆಇ 01 ಬಿಪಿಇ 2021 ಬೆಂಗಳೂರು, ದಿನಾಂಕ:27.01.2021 ರಲ್ಲಿ ನಿಗಧಿಗೊಳಿಸಲಾಗಿದ್ದ ಕಾಲಮಿತಿಯು ಮುಂದುವರೆಯುತ್ತದೆ.

**ಈ ಆದೇಶವನ್ನು ಆರ್ಥಿಕ ಇಲಾಖೆಯ ವೆಬ್ ಸೈಟ್ www.finance.karnataka.gov.in ನಿಂದ ಪಡೆಯಬಹುದು.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

24/3/2021

(ಹೆಚ್.ಎ ಶೋಭ)

ಸರ್ಕಾರದ ಉಪ ಕಾರ್ಯದರ್ಶಿ (ಎಫ್.ಆರ್ ಮತ್ತು ಬಿಸಿಸಿ)

ಆರ್ಥಿಕ ಇಲಾಖೆ.

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು (A&E) / (G&SSA) / (E&RSA), ಕರ್ನಾಟಕ, ಬೆಂಗಳೂರು.
2) ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
3) ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕರ್ನಾಟಕ, ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ, ಬೆಂಗಳೂರು.

5) ಸರ್ಕಾರದ ಎಲ್ಲಾ ಅಪರ / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.

6) ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.

7) ಲೋಕಾಯುಕ್ತರು, ಕರ್ನಾಟಕ, ಬೆಂಗಳೂರು.

8) ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.

9) ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

10) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.

11) ಆಯುಕ್ತರು, ಖಜಾನೆ ಇಲಾಖೆ, ಬೆಂಗಳೂರು.

12) ಎಲ್ಲಾ ಆಂತರಿಕ ಆರ್ಥಿಕ ಸಲಹೆಗಾರರು.

13) ಎಲ್ಲಾ ಇಲಾಖಾ ಮುಖ್ಯಸ್ಥರು.

14) ಕಛೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.